ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 :** **ದಿನಾಂಕ: 4–1–2015**

**ಪತ್ರಿಕಾ ಪ್ರಕಟಣೆ**

## ಸಾಮಾಜಿಕ - ಶೈಕ್ಷಣಿಕ ಸಮೀಕ್ಷೆ : ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜ.5 ರಂದು ಸಭೆ

**ಬೆಂಗಳೂರು, ಜ. 4 (ಕರ್ನಾಟಕ ವಾರ್ತೆ)-** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದಲ್ಲಿ ಕೈಗೊಳ್ಳಲಾಗುತ್ತಿರುವ 'ಸಾಮಾಜಿಕ - ಶೈಕ್ಷಣಿಕ ಸಮೀಕ್ಷೆ'ಗೆ ಸಂಬಂಧಿಸಿದಂತೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಜನವರಿ 5 ರಂದು ವಿಧಾನಸೌಧದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯನ್ನು ಕರೆಯಲಾಗಿದೆ.

ಕೈಗೊಳ್ಳಲಾಗುತ್ತಿರುವ ಸಮೀಕ್ಷೆಗೆ ಸಂಬಂಧಿಸಿದಂತೆ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ನಗರ ಪ್ರದೇಶಗಳಲ್ಲಿ ಆಗಿರುವ ಪೂರ್ವ ಸಿದ್ಧತೆ ಕುರಿತು ಪರಿಶೀಲಿಸಲು ಬಿಬಿಎಂಪಿ ಆಯುಕ್ತರು ಮತ್ತು 8 ವಲಯ ಕಚೇರಿಗಳ ಜಂಟಿ ಆಯುಕ್ತರು ಹಾಗೂ 10 ಮಹಾನಗರ ಪಾಲಿಕೆಗಳ ಆಯುಕ್ತರನ್ನು ಸಹ ಸಭೆಗೆ ಆಹ್ವಾನಿಸಲಾಗಿದೆ.

ಸಭೆಯಲ್ಲಿ ಪ್ರಮುಖವಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಕಾರ್ಯಚಟುವಟಿಕೆಗಳ ಬಗ್ಗೆ ಪ್ರಾತ್ಯಕ್ಷಿಕೆ ನೀಡಲಾಗುವುದು. ಅಲ್ಲದೆ, ಸಮೀಕ್ಷೆಗಾಗಿ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ, ಸಮೀಕ್ಷೆಗಾಗಿ ಯಾವ ಅಂಶಗಳನ್ನು ಪ್ರಮುಖವಾಗಿ ಸೇರ್ಪಡೆ ಮಾಡಿಕೊಳ್ಳಬೇಕು ಹಾಗೂ ಸಂಗ್ರಹಿಸಲಾಗುವ ಮಾಹಿತಿಗಳನ್ನು ಕಂಪ್ಯೂಟರ್‌ನಲ್ಲಿ ಸೇರಿಸಲು ಗಣಕೀಕರಣ ಕೇಂದ್ರಕ್ಕೆ ಕಳುಹಿಸುವ ಬಗ್ಗೆ ಚರ್ಚಿಸಲಾಗುವುದು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2013-14ರ ಬಜೆಟ್‌ನಲ್ಲಿ ರಾಜ್ಯದ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಳನ್ನು ನಡೆಸುವುದಾಗಿ ಪ್ರಕಟಿಸಿದ್ದರು. ಅಲ್ಲದೆ, ರಾಜ್ಯದ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭಿಸುವುದಕ್ಕಾಗಿ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಕ್ಕೆ ತಿದ್ದುಪಡಿ ತಂದು ಹಿಂದುಳಿದ ವರ್ಗಗಳ ಕಲ್ಯಾಣ ಆಯುಕ್ತರು ಆಯೋಗದ ಸದಸ್ಯ ಕಾರ್ಯದರ್ಶಿಯವರನ್ನಾಗಿ ನೇಮಿಸಿದೆ.

ರಾಜ್ಯದ ನಾಗರಿಕರ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ನಡೆಸುವುದು, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದ ವರ್ಗಗಳನ್ನು ಗುರುತಿಸುವ ಜವಾಬ್ದಾರಿಯನ್ನು ಈ ಸಮೀಕ್ಷೆಯು ಹೊಂದಿದೆ. ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸುವಂತೆ ಸಲ್ಲಿಕೆಯಾದ ಅರ್ಜಿಪರಿಶೀಲಿಸುವುದಕ್ಕೆ ಈ ಸಮೀಕ್ಷೆಯು ಅವಕಾಶ ಕಲ್ಪಿಸುತ್ತದೆ.

ಸಮಾಜದಲ್ಲಿ ಶೋಷಿತ, ನಿರ್ಲಕ್ಷಿತ ವರ್ಗದವರಿಗೆ ನ್ಯಾಯ ಕೊಡಿಸುವ ಹಾಗೂ ಸಮಾಜದಲ್ಲಿರುವ ಎಲ್ಲಾ ಜಾತಿ, ಉಪಜಾತಿಗಳ ಬಗೆಗೆ ಮಾಹಿತಿಯನ್ನು ಕಲೆಹಾಕುವ ನಿಟ್ಟಿನಲ್ಲಿ ಈ ಸಮೀಕ್ಷೆ ನಡೆಸಲಾಗುತ್ತಿದೆ. ಸಮೀಕ್ಷೆಯು ಹೆಚ್ಚು ನಿಖರವಾಗಿರಲು ಅನುಕೂಲವಾಗುವಂತೆ ಜನರು ಸಮೀಕ್ಷೆ ನಡೆಸುವವರಿಗೆ ಸಹಕರಿಸಿ ಸರಿಯಾದ ಮಾಹಿತಿ ನೀಡಬೇಕು ಎಂದು ಆಯೋಗವು ಮನವಿ ಮಾಡಿದೆ.

************